ಆ) ಈ ವರ್ಷದಲ್ಲಿ ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆ ಎಷ್ಟು, (ತಾಲ್ಲೂಕುವಾರು ವಿವರ ನೀಡುವುದು) ?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) ಪ್ರಸಕ್ತ ಸಲಿನಲ್ಲಿ ಗುರಿ ನಿಗದಿಪಡಿಸಿದೆ

ಈ ವರ್ಷದಲ್ಲಿ ಅಂದರೆ 2006–07ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿಯಲ್ಲಿ ಒಟ್ಟು 340560 ಮನೆಗಳ ಗುರಿಯನ್ನು ನಿಗದಿಪಡಿಸಲಾಗಿದೆ ನಗರ ಆಶ್ರಯ ಯೋಜನೆಯಡಿಯಲ್ಲಿ ಯಾವುದೇ ಗುರಿಯನ್ನು ನಿಗದಿ ಪಡಿಸಿರುವುದಿಲ್ಲ

ಆ) ತಾಲ್ಲೂಕುವಾರು ವಿವರವನ್ನು ಅನುಬಂಧ 'ಅ' ದಲ್ಲಿ ನೀಡಲಾಗಿದೆ

33 (85) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಸರ್ಕಾರಿ ಶಾಲೆಗಳಲ್ಲಿ ಒಂದನೇ ತರಗತಿಯಿಂದ ಇಂಗ್ಲೀಷ್ ಕಲಿಸುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ,

ಆ) ಇದ್ದಲ್ಲಿ, ಇದನ್ನು ಯಾವಾಗ ಜಾರಿಗೊಳಿಸಲಾಗುವುದು ,

ಇ) 1994ನೇ ಜೂನ್ ನಂತರ ಆರಂಭಗೊಂಡ ಇಂಗ್ಲೀಷ್ ಮಾಧ್ಯಮದ ಖಾಸಗಿ ಶಾಲೆಗಳಿಗೆ, 1994ನೇ ಜೂನ್ ಪೂರ್ವದಲ್ಲಿ ಆರಂಭಗೊಂಡ ಶಾಲೆಗಳಿಗೆ ರಾಜ್ಯ ಉಚ್ಚ ನ್ಯಾಯಾಲಯದ ತಡೆಯಾಜ್ಞೆಯ ಅನ್ವಯ ವಿನಾಯ್ತಿ ನೀಡದಂತೆ ಈ ಶಾಲೆಗಳಲ್ಲಿ ವಿನಾಯ್ತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ,

ಈ) ಇಲ್ಲವಾದಲ್ಲಿ, ಸುಮಾರು ಮೂರು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ,

ಉ) ಹೌದಾದಲ್ಲಿ, ತಕ್ಷಣಕ್ಕೆ ಸರ್ಕಾರಿ ಶಾಲೆಗಳಲ್ಲಿ ಪ್ರವೇಶ ನೀಡುವಷ್ಟು ಶಾಲಾ ಕೊರಡಿಗಳು, ಶಿಕ್ಷಕರ ವ್ಯವಸ್ಥೆ ಇದೆಯೇ ,

ಊ) ಈ ನಿಟ್ಟಿನಲ್ಲಿ ಪರ್ಯಾಯವಾಗಿ ಪ್ರವೇಶ ಕಲ್ಪಿಸಲು ಉದ್ದೇಶಿಸಿರುವ ಶಾಲೆಗಳಾವುವು , (ವಿವರ ನೀಡುವುದು) ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕನ್ನಡ ಮತ್ತು ಇತರೆ ಅಲ್ಪಸಂಖ್ಯಾತರ ಭಾಷಾ ಮಾಧ್ಯಮ ಶಾಲೆಗಳಲ್ಲಿ ಇಂಗ್ಲೀಷ್ ಭಾಷೆಯನ್ನು ಒಂದು ವಿಷಯವನ್ನಾಗಿ (ಎರಡನೇ ಭಾಷೆಯಾಗಿ) 2007–08ನೇ ಸಾಲಿನಿಂದ ಮೊದಲನೇ ತರಗತಿಯಿಂದ ಕಲಿಸಲು ದಿ 21 10 2006ರ ಸರ್ಕಾರದ ಆದೇಶ ಸಂಖ್ಯೆ ಇಡಿ 37 ಪಿಜಿಸಿ 2003ರನ್ವಯ ಆಸ್ಪದವನ್ನು ಕಲ್ಪಿಸಲಾಗಿದೆ

ಇ) ಇಲ್ಲ, ಕಿರಿಯ ಪ್ರಾಥಮಿಕ ಶಾಲಾ ಹಂತದಲ್ಲಿ ಮಾತೃಭಾಷೆ ಅಥವಾ ಕನ್ನಡ ಮಾಧ್ಯಮದಲ್ಲಿ ಕಲಿಸಲಾಗುವುದೆಂದು ನೋಟರಿ ಮುಂದೆ ಪ್ರತಿಜ್ಞೆ ಸ್ವೀಕರಿಸಿ ಛಾಪಾ ಕಾಗದದ ಮೇಲೆ ಬರೆದು ಕೊಟ್ಟ ಹೇಳಿಕೆಯನ್ನು ಉಲ್ಲಂಘಿಸಿ ಇಂಗ್ಲೀಷ್ ಮಾಧ್ಯಮದಲ್ಲಿ ಕಲಿಸುತ್ತಿರುವ ಖಾಸಗಿ ಪ್ರಾಥಮಿಕ ಶಾಲೆಗಳ ಮಾನ್ಯತೆಯನ್ನು ಸಕ್ಷಮ ಪ್ರಾಧಿಕಾರಗಳು ಹಿಂಪಡೆದಿರುತ್ತಾರೆ

ಈ) ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ

37 (125) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಒಟ್ಟು ಅನುದಾನದಲ್ಲಿ ಶೆ 50 ರಷ್ಟು ಉತ್ತರ ಕರ್ನಾಟಕದ 8 ಜಿಲ್ಲೆಗಳಿಗೆ ಒದಗಿಸಲಾಗಿದೆಯೇ (ಜಿಲ್ಲಾವಾರು ವಿವರ ಒದಗಿಸುವುದು) ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಒದಗಿಸಿಲ್ಲ, ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ ಒದಗಿಸಲಾಗಿದೆ ರಾಜ್ಯ ಹಾಗೂ ಜಿಲ್ಲಾ ವಲಯಗಳ ವಿವರ ಈ ಕೆಳಕಂಡಂತಿದೆ

ಒಟ್ಟು ಅನುದಾನ			
ಕಾರ್ಯಕ್ರಮಗಳು	ಯೋಜನೆ	ಯೋಜನೇತರ	ಒಟ್ಟು
ಜಿಲ್ಲಾ ವಲಯ	81,000 39	31,32,295 01	3,94,295 40
ರಾಜ್ಯ ವಲಯ	31,055 37	7,394 34	38,449 71
ಸರ್ವ ಶಿಕ್ಷಣ ಅಭಿಯಾನ	74,215 00	–	74,215 00
ಒಟ್ಟು	1,86,270 76	3,20,689 35	5,06,960 11